ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಸಭಾಪತಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 05/03/2020

# ಸಂವಿಧಾನದ ಆಶಯ ತಲುಪಿಸುವುದು ನಮ್ಮ ಜವಾಬ್ದಾರಿ

**ವಿಧಾನಪರಿಷತ್**: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಕನಸಿನ ಭಾರತವನ್ನು ನನಸು ಮಾಡುವ ನೆಲೆಯಲ್ಲಿ ನಮ್ಮ ಸಂವಿಧಾನವನ್ನು ಜನಸಾಮಾನ್ಯರಿಗೆ ತಲುಪುವಂತೆ ಮಾಡಬೇಕಾದ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಸಭಾಪತಿ ಕೆ. ಪ್ರತಾಪಚಂದ್ರ ಶೆಟ್ಟಿ ತಿಳಿಸಿದರು.

ಬುಧವಾರ ವಿಧಾನಪರಿಷತ್‌ನಲ್ಲಿ ಸಂವಿಧಾನ ಕುರಿತು ವಿಶೇಷ ಚರ್ಚೆಗೆ ಪ್ರಾಸ್ತಾವಿಕ ಭಾಷಣ ಮಾಡಿದ ಅವರು, ಸಂವಿಧಾನವನ್ನು ಅಪಾರ್ಥ ಮಾಡಿಕೊಳ್ಳುವ ಅಥವಾ ಅರ್ಥ ಮಾಡಿಕೊಂಡೇ ಅಸಹನೆಯವಾಗಿ ವರ್ತಿಸುತ್ತಿರುವ ಸನ್ನಿವೇಶದಲ್ಲಿ ಜನರಿಗೆ ಸರಳ ಹಾಗೂ ಸ್ಪಷ್ಟ ಮಾಹಿತಿಯನ್ನು ಕೊಡುವ ಅಗತ್ಯವಿದೆ ಎಂದರು.



ಅಭಿವ್ಯಕ್ತಿ ಸ್ವಾತಂತ್ರ್ಯವು ಪ್ರಜಾತಂತ್ರ ವ್ಯವಸ್ಥೆಯ ತಳಹದಿ ಎಂಬ ಸ್ಪಷ್ಟ ಕಲ್ಪನೆ ನಮ್ಮ ಸಂವಿಧಾನ ರಚನಕಾರರಿಗೆ ತಿಳಿದಿತ್ತು. ಫ್ರಾನ್ಸ್‌ನ ಚಿಂತಕ ವಾಲ್ಟೇರ್, ನಿನ್ನ ಯಾವ ಮಾತನ್ನೂ ನಾನು ಒಪ್ಪುವುದಿಲ್ಲ. ಆದರೆ, ನಿನ್ನ ಅಭಿಪ್ರಾಯವನ್ನು ವ್ಯಕ್ತಪಡಿಸುವ ಹಕ್ಕನ್ನು ನನ್ನ ಉಸಿರಿರುವವರೆಗೂ ಸಮರ್ಥಿಸುತ್ತೇನೆ ಎಂಬ ಮಾತು ಈ ಕಾಲಘಟ್ಟಕ್ಕೆ ಹೆಚ್ಚು ಪ್ರಸ್ತುತವಾಗುತ್ತದೆ ಎಂದು ತಿಳಿಸಿದರು.

ಭಾರತದ ಸಂವಿಧಾನವನ್ನು ಅರ್ಥ ಮಾಡಿಕೊಳ್ಳುವ ಮೊದಲು ಭಾರತದ ವೈವಿಧ್ಯಮಯ ಸಂಸ್ಕೃತಿ, ಭಾಷೆ, ಆಹಾರ ಪದ್ಧತಿ, ಇತಿಹಾಸ, ಆರ್ಥಿಕ, ಸಾಮಾಜಿಕ, ರಾಜಕೀಯ ಸಂಬಂಧಗಳು, ನಂಬಿಕೆಗಳು, ಉಡುಪು, ಆಚಾರ, ವಿಚಾರಗಳನ್ನು ಆಳವಾಗಿ ತಿಳಿದುಕೊಂಡಾಗ ಮಾತ್ರ ನಮ್ಮ ದೇಶವನ್ನು ಸರಿಯಾಗಿ ಅರ್ಥ ಮಾಡಿಕೊಳ್ಳುವುದಕ್ಕೆ ಸಹಾಯಕವಾಗುತ್ತದೆ ಎಂದು ಹೇಳಿದರು.

ಭಾರತ ಸಂವಿಧಾನದ ಮಹತ್ವ ಹಾಗೂ ಡಾ.ಬಿ.ಆರ್.ಅಂಬೇಡ್ಕರ್‌ರವರ ವಿಚಾರಧಾರೆಯನ್ನು ಸಮಾಜದ ಕಟ್ಟ ಕಡೆಯ ಪ್ರಜೆಯವರೆಗೂ ತಲುಪಿಸಬೇಕಾಗಿದೆ. ಹೀಗಾಗಿ ಸಂವಿಧಾನವನ್ನು ಅತ್ಯಂತ ಆಳವಾಗಿ ಮತ್ತು ಎಲ್ಲರಿಗೂ ತಲುಪುವ ರೀತಿಯಲ್ಲಿ ಅರ್ಥ ಮಾಡಿಸಲು ಸಮೂಹ ಮಾಧ್ಯಮಗಳ ನೆರವನ್ನು ಪಡೆಯುವುದು ಅತ್ಯಂತ ಅವಶ್ಯಕವಾಗಿದೆ ಎಂದು ಹೇಳಿದರು.

ಭಾರತದ ಸಂವಿಧಾನ ರಚನಾಕಾರರ ಮೇಲೆ ಪ್ರಭಾವ ಬೀರಿದ ಕೆಲವು ಪ್ರಮುಖ ಅಂಶಗಳೆಂದರೆ: 1776ರ ಅಮೆರಿಕಾ ಕ್ರಾಂತಿಯ ಘೋಷಣೆ ಸೃಷ್ಟಿಯಲ್ಲಿ ಎಲ್ಲ ಮನುಷ್ಯರು ಸಮಾನರು. 1789ರ ಫ್ರೆಂಚ್ ಕ್ರಾಂತಿಯ ಘೋಷಣೆ. ಸ್ವಾತಂತ್ರ್ಯ, ಸಮಾನತೆ ಮತ್ತು ಸಹೋದರತ್ವ, 1917ರ ರಷ್ಯಾ ಕ್ರಾಂತಿಯ ಘೋಷಣೆ ಸಾಮರ್ಥ್ಯಕ್ಕನುಸಾರವಾಗಿ ದುಡಿಯಬೇಕು. ಅಗತ್ಯಕ್ಕೆ ಅನುಸಾರವಾಗಿ ಪಡೆಯಬೇಕು. ಹಾಗೂ 1948ರ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಘೋಷಣೆಯಾಗಿದೆ ಎಂದರು.